ಸಿ.ಸಿಃ 1353/2024
ಚಾ.ಸಾಃ 05
ಪ್ರಾ.ಸಾಃ 07

# <u>ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಬಸವನ-ಬಾಗೇವಾಡಿ</u>

**ಸಾಕ್ಷಿಗೆ ದಿನಾಂಕ 06.01.2026 ರಂದು ಪ್ರಮಾಣ ವಚನ ಬೋಧಿಸಲಾಯಿತು.**

ಹೆಸರು ಃ ಮಂಜುನಾಥ ಕಲಾಲ

ತಂದೆಯ ಹೆಸರು ಃ ಬಾಲಕೃಷ್ಣ

ವಯಸ್ಸು ಃ 37 ವರ್ಷ

ಉದ್ಯೋಗ ಃ ಖಾಸಗಿ ಉದ್ಯೋಗ

ವಾಸಸ್ಥಳ ಃ ಬ.ಬಾಗೇವಾಡಿ

**<u>ಮುಖ್ಯ ವಿಚಾರಣೆ ಸರ್ಕಾರಿ ಅಭಿಯೋಜಕರವರಿಂದಃ</u>**

ಸಾಕ್ಷಿಗೆ ಎರಡು ದಾಖಲಾತಿಗಳನ್ನು ತೋರಿಸಿದ್ದು, ಅವುಗಳು ಅಮಾನತ್ತು ಮಹಜರಾಗಿದ್ದು, ಸಾಕ್ಷಿ ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅವುಗಳನ್ನು ಈಗಾಗಲೇ ನಿಪಿ-1 ಮತ್ತು 2 ಎಂದು ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1 ಬಿ ಮತ್ತು 2 ಬಿ ಎಂದು ಗುರುತಿಸಲಾಯಿತು. ಅದರಲ್ಲಿ ಏನು ಬರೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ಮಹಜರ ಕ್ರಮ ಜರುಗಿಸಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ವಾಹನವನ್ನು ಜಪ್ತುಪಡಿಸಿಕೊಂಡಿರುವುದಿಲ್ಲ. ಸಾಕ್ಷಿಗೆ ಒಂದು ಫೋಟೋ ತೋರಿಸಿದ್ದು, ಅದನ್ನು ಈಗಾಗಲೇ ನಿಪಿ-3 ಎಂದು ಗುರುತಿಸಿದ್ದು, ಅದನ್ನು ಯಾವ ಕಾರಣಕ್ಕಾಗಿ ತಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

**(ಮಾನ್ಯ ಸ.ಸ.ಅ ರವರು ಸಾಕ್ಷಿ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಅನುಮತಿಸಲಾಯಿತು)**

**ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ**

2. ದಿಃ **02.02.2024** ರಂದು ಪೊಲೀಸರು ಕೆಎ-**40**/ಎಲ್-**5434** ಮತ್ತು ಕೆಎ-**28**/ಝಡ್-**7298** ವಾಹನಗಳನ್ನು ಜಪ್ತುಪಡಿಸಿಕೊಂಡು ಮಹಜರ ಕ್ರಮ ಜರುಗಿಸುವಾಗ ನಿಪಿ-**1** ಮತ್ತು **2** ಕ್ಕೆ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಿಪಿ-**3** ರಂತೆ ಪೋಟೋ ತಗೆಯಲಾಗಿತ್ತು ಎಂದರೆ ಸರಿಯಲ್ಲ. ಎಲ್ಲಾ ವಿಷಯ ಗೊತ್ತಿದ್ದರು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಏನೂ ಇಲ್ಲ ಅಂತಾ ಹೇಳಿರುತ್ತಾರೆ.**

**ಮರುವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸರಿ ಅದೆ.**

**(ಶ್ರೀ. ಅಮೀತ್ ಘಟ್ಟಿ )**
**ದಿವಾಣಿ ನ್ಯಾಯಾಧೀಶರು ಮತ್ತು**
**ನ್ಯಾಯಿಕ ದಂಡಾಧಿಕಾರಿಗಳು**
**ಬಸವನ ಬಾಗೇವಾಡಿ.**